ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

17

ಇಲಾಖೆ / ವಿಷಯ : DEPARTMENT / SUBJECT: ಗೃಹ ಡಿ.ಜೆ.ಹಳ್ಳಿ ಗಲಭೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 1-12-202

# ಅಧಿಕಾರಿಗಳನ್ನೇ ಇಕ್ಕಟ್ಟಿಗೆ ಸಿಲುಕಿಸಿದ ಸಂಪತ್‌ರಾಜ್

ಸಂ.ಕ 1/12/20

ಬೆಂಗಳೂರು: ಡಿ.ಜೆ ಹಳ್ಳಿ ಮತ್ತು ಕೆಜಿ ಹಳ್ಳಿ ಗಲಭೆ ವೇಳೆ ಶಾಸಕ ಅಖಂಡ ಶ್ರೀನಿವಾಸ್ ಮನೆಗೆ ಬೆಂಕಿ ಹಚ್ಚಲು ಪ್ರೇರೇಪಿಸಿದ ಆರೋಪದಡಿ ಬಂಧನಕ್ಕೆ ಒಳಗಾಗಿರುವ ಮಾಜಿ ಮೇಯರ್ ಸಂಪತ್‌ರಾಜ್ ಅವರು ತನಿಖಾಧಿಕಾರಿಗಳನ್ನೇ ಸಂಕಷ್ಟಕ್ಕೆ ಸಿಲುಕಿಸಿದ್ದಾರೆ. ಸಿಸಿಬಿ ಪೊಲೀಸರು ನ.16ರಂದು ಸಂಪತ್‌ರಾಜ್ ಅವರನ್ನು ಬಂಧಿಸಿದ್ದರು. ಆ ದಿನವೇ ಆಸ್ಪತ್ರೆಯಲ್ಲಿ ವೈದ್ಯಕೀಯ ತಪಾಸಣೆ ಮಾಡಿಸಿದ್ದರು. ಈ ವೇಳೆ ಸಣ್ಣಪುಟ್ಟ ಸಮಸ್ಯೆ ಬಿಟ್ಟರೆ ಅಡ್ಮಿಟ್ ಆಗುವ ಅವಶ್ಯಕತೆಯಿಲ್ಲ ಎಂದು ಆಸ್ಪತ್ರೆಯ ಮೂಲಗಳು ಅಧಿಕಾರಿಗಳಿಗೆ ತಿಳಿಸಿದ್ದರು.

ಇದಾದ ಬಳಿಕ ಮಾರನೇ ದಿನ ಮೆಡಿಕಲ್ ಚೆಕಪ್ ಮಾಡಿಸದೇ ನೇರವಾಗಿ ನ್ಯಾಯಾಲಯದ ಮುಂದೆ ಹಾಜರು ಪಡಿಸಿದ್ದ ಅಧಿಕಾರಿಗಳು, ಸಿಸಿಎಚ್‌ನ 67ನೇ ಕೋರ್ಟ್‌ಗೆ ಹಾಜರು ಪಡಿಸಿ, ಸಂಪತ್‌ರಾಜ್ ಅವರನ್ನು ಕಸ್ಟಡಿಗೆ ಪಡೆದು ನಂತರ, ಅವಧಿ ಮುಗಿದ ಮೇಲೆ ಮತ್ತೆ ಕೋರ್ಟ್‌ಗೆ ಹಾಜರುಪಡಿಸಲಾಗಿತ್ತು. ಈ ವೇಳೆ, ಅಧಿಕಾರಿಗಳನ್ನು ಕೋರ್ಟ್‌ನಲ್ಲಿ ಸಿಲುಕಿಸಿದ ಸಂಪತ್‌ರಾಜ್ ತನಗೆ ಆರೋಗ್ಯ ಸರಿ ಇಲ್ಲದಿದ್ದರೂ ರಾತ್ರಿ ಇಡೀ ವಿಚಾರಣೆ ನಡೆಸಿದ್ದಾರೆಂದು ಕೋರ್ಟ್‌ನಲ್ಲಿ ಆರೋಪಿಸಿದ್ದರು. ಇದರಿಂದ ಅಸಮಾಧಾನ ವ್ಯಕ್ತಪಡಿಸಿದ ನ್ಯಾಯಾಧೀಶರು ಆರೋಪಿತರನ್ನು ಕೋರ್ಟ್‌ಗೆ ಹಾಜರುಪಡಿಸುವ ವೇಳೆ ಸುಪ್ರೀಂಕೋರ್ಟ್‌ನ ಮಾರ್ಗಸೂಚಿಗಳನ್ನು ಅನುಸರಿಸಿಲ್ಲವೇಕೆ. ಆರೋಗ್ಯ ಸರಿ ಇಲ್ಲ ಎಂದು ಹೇಳಿದ್ದರೂ ಏಕೆ ವಿಚಾರಣೆ ನಡೆಸಲಾಗಿದೆ. ಅವರ ಆರೋಗ್ಯ ಸರಿ ಇಲ್ಲ ಎಂದ ಮೇಲೆ ಆಸ್ಪತ್ರೆಗೆ ಕರೆದುಕೊಂಡು ಪರೀಕ್ಷೆಗೆ ಒಳಪಡಿಸಬೇಕಾಗಿತ್ತು ಎಂದು ಪ್ರಶ್ನೆ ಮಾಡಿದ್ದಾರೆ. ಈ ಬಗ್ಗೆ ಸಿಸಿಬಿಗೆ ನೋಟಿಸ್ ನೀಡುವ ಸಾಧ್ಯತೆಯೂ ಇದೆ. ಒಂದು ವೇಳೆ ನೋಟಿಸ್ ಬಂದಲ್ಲಿ ಅದಕ್ಕೆ ಉತ್ತರ ನೀಡಲು ಎಲ್ಲ ರೀತಿಯಲ್ಲೂ ಸಿಸಿಬಿ ಪೊಲೀಸರು ದಾಖಲೆಗಳನ್ನು ಸಿದ್ಧಪಡಿಸಿಕೊಂಡಿದ್ದಾರೆ ಎನ್ನಲಾಗಿದೆ.